## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ನಿರಂತರವಾಗಿ ಗ್ರಾಮ ಪಂಚಾಯಿತಿಯ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವ ಬಗ್ಗೆ.

**ಓದಲಾಗಿದೆ:**

1. ಅಪರ ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ ರವರ ದಿನಾಂಕ:25-08-2016ರ ಪ್ರಸ್ತಾವನೆ.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:14-12-2016ರ ಕಾರಣ ಕೇಳುವ ನೋಟೀಸು.
3. ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ದಿನಾಂಕ:06-01-2017 & 10-02-2017ರ ಲಿಖಿತ ಹೇಳಿಕೆ.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ:25-08-2016ರ ಅಪರ ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ ರವರ ಪ್ರಸ್ತಾವನೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ದಿನಾಂಕ:09-11-2015, 04-01-2016, 04-03-2016 ಮತ್ತು 05-04-2016 ರಂದು ನಡೆದ ಕುಣಿಬೆಳಕೆರೆ ಗ್ರಾಮ ಪಂಚಾಯಿತಿಯ ನಾಲ್ಕು ಸಾಮಾನ್ಯ ಸಭೆಗಳಿಗೆ ಪಂಚಾಯಿತಿಯ ಅನುಮತಿ ಇಲ್ಲದೆ ಗೈರು ಹಾಜರಾಗಿರುತ್ತಾರೆಂದು ತಿಳಿಸಿದ್ದು, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 13 (1) (ಸಿ) ರನ್ವಯ ಗ್ರಾಮ ಪಂಚಾಯಿತಿ ಅನುಮತಿ ಇಲ್ಲದೇ ಮೂರಕ್ಕಿಂತ ಹೆಚ್ಚು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾದರೆ ಅಥವಾ ನಾಲ್ಕು ತಿಂಗಳಿಗಿಂತ ಹೆಚ್ಚು ಕಾಲ ಪಂಚಾಯಿತಿ ಪ್ರದೇಶದಲ್ಲಿ ಇಲ್ಲದಿದ್ದರೆ ರಾಜ್ಯ ಚುನಾವಣಾ ಆಯೋಗವು ಅದಾಗಿಯೇ ಅಥವಾ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ಕೊಟ್ಟು ತರುವಾಯ ಆ ಪ್ರಶ್ನೆಯನ್ನು ತೀರ್ಮಾನಿಸಬಹುದಾಗುತ್ತದೆಂದು ತಿಳಿಸಿರುತ್ತದೆ. ಪ್ರಯುಕ್ತ ಸದರಿ ಪ್ರಕರಣದಲ್ಲಿ ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಸತತವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಅನುಮತಿ ಪಡೆಯದೆ ಗೈರು ಹಾಜರಾಗಿರುವುದರಿಂದ ಪ್ರಕರಣ 43(ಎ)(1)(iii) ರಂತೆ ಕ್ರಮ ಕೈಗೊಳ್ಳಲು ರಾಜ್ಯ ಚುನಾವಣಾ ಆಯೋಗದ ನಿರ್ದೇಶನದಂತೆ ಅಪರ ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ದಿನಾಂಕ:09-11-2015, 04-01-2016, 04-03-2016 ಮತ್ತು 05-04-2016 ರಂದು ನಡೆದ ಕುಣಿಬೆಳಕೆರೆ ಗ್ರಾಮ ಪಂಚಾಯಿತಿಯ ನಾಲ್ಕು ಸಾಮಾನ್ಯ ಸಭೆಗಳಿಗೆ ಪಂಚಾಯಿತಿಯ ಅನುಮತಿ ಇಲ್ಲದೆ ಗೈರು ಹಾಜರಾಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಇವರಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ದಿನಾಂಕ:06-01-2017 & 10-02-2017 ರ ಲಿಖಿತ ಹೇಳಿಕೆಯನ್ನು ಈ ಕೆಳಕಂಡಂತೆ ನೀಡಿರುತ್ತಾರೆ.

ಕುಣಿಬೆಳಕೆರೆ ಗ್ರಾಮ ಪಂಚಾಯಿತಿಯ ಸದಸ್ಯನಾದ ತನ್ನ ವಿರುದ್ಧ ಸದರಿ ಗ್ರಾಮದ ಕೆಲವು ರಾಜಕೀಯ ಮುಖಂಡರು ಹಾಗೂ ಕೆಲವು ಸದಸ್ಯರು ರಾಜಕೀಯ ದ್ವೇಷದಿಂದ ದಾವಣಗೆರೆ ಮಹಿಳಾ ಪೊಲೀಸ್ ಠಾಣೆಯಲ್ಲಿ ದಿನಾಂಕ:03-11-2015 ರಂದು ತನ್ನ ವಿರುದ್ಧ ಸುಳ್ಳು ಕೇಸನ್ನು ಸದರಿ ಗ್ರಾಮದ ವಾಸಿಯೊಬ್ಬರಿಂದ ನೀಡಿಸಿ, ತನಗೆ ಜೈಲಿನಲ್ಲಿರುವ ಹಾಗೆ ಮಾಡಿದ. ಪಿರ್ಯಾದು ಎಸ್.ಸಿ.ನಂ.12/2016 ಕೇಸಿನಡಿಯಲ್ಲಿ ಗೌರವಾನ್ವಿತ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಟ್ಟಿದ್ದು, ತಾನು ನ್ಯಾಯಾಂಗ ಬಂಧನದಲ್ಲಿದ್ದಾಗ ಕುಣಿಬೆಳಕೆರೆ

ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 7 ಸಾಮಾನ್ಯ ಸಭೆಗಳು ನಡೆದಿದ್ದು, ಅದರಲ್ಲಿ ಗೌರವಾನ್ವಿತ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಪರವಾನಗೆ ಪಡೆದು 3 ಸಾಮಾನ್ಯ ಸಭೆಗಳಿಗೆ ತಾನು ಹಾಜರಾಗಿರುತ್ತೇನೆ. ಹಾಗೂ ಇನ್ನುಳಿದ 4 ಸಭೆಗಳಿಗೆ ಹಾಜರಾಗಲು ಆಗಿರುವುದಿಲ್ಲ. ತನ್ನ ವಿರುದ್ಧ ದಾಖಲಾಗಿದ್ದ ಕೇಸಿನಲ್ಲಿ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ತನ್ನನ್ನು ನಿರಪರಾಧಿ ಎಂದು ಘೋಷಿಸಿ, ದಿ:03-09-2016 ರಂದು ಬಿಡುಗಡೆ ಮಾಡಿರುತ್ತಾರೆ. ಈ ಕಾರಣಗಳಿಂದ 4 ಸಾಮಾನ್ಯ ಸಭೆಗಳಿಗೆ ಗೈರು ಹಾಜರಾತಿಯನ್ನು ಸಕಾರಣವನ್ನು ಪರಿಗಣಿಸಬೇಕೆಂದು ಕೋರಿರುತ್ತಾರೆ.

ಅಪರ ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ ರವರ ಪ್ರಸ್ತಾವನೆ, ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ನೀಡಿರುವ ಲಿಖಿತ ಹೇಳಿಕೆಗಳನ್ನು ಸರ್ಕಾರವು ಪರಿಶೀಲಿಸಿದ್ದು, ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಗ್ರಾಮ ಪಂಚಾಯಿತಿಯ 4 ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರುಹಾಜರಾಗಿರುವುದು ಸ್ಪಷ್ಟವಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ಇವರನ್ನು ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1089 ಗ್ರಾಪಂಅ 2016 ಬೆಂಗಳೂರು, ದಿನಾಂಕ: 13-09-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಗ್ರಾಮ ಪಂಚಾಯಿತಿಯ 4 ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರುಹಾಜರಾಗಿರುವುದು ಸ್ಪಷ್ಟವಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರನ್ವಯ ಇವರನ್ನು ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

13/9

(ಟಿ.ವಿ. ಅರುಣ್‌ಕುಮಾರ್),
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ, ದಾವಣಗೆರೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಜಿಲ್ಲೆ.
3. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ.
4. ಶ್ರೀ ಬಿ.ಎಸ್. ಆಂಜಿನಪ್ಪ ಬಿನ್ ಸಿದ್ಧಪ್ಪ, ಸದಸ್ಯರು, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುಣಿಬೆಳಕೆರೆ ಗ್ರಾಮ ಪಂಚಾಯಿತಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ.
6. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.